KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಬಜೆಟ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 02/03/2020


# ಇಂದಿನಿಂದ 'ಬಿಸಿಬಿಸಿ ಬಜೆಟ್' ಅಧಿವೇಶನ!

## ಸಿಎಎ, ಪಾಕ್ ಪರ ಘೋಷಣೆ, ಪ್ರವಾಹ ಸಂತ್ರಸ್ತರು, ಪಡಿತರ ಅಕ್ಕಿ ಪ್ರಮಾಣ ಕಡಿತ, ಸಾಲ ಮನ್ನಾ ಕುರಿತು ಗದ್ದಲ ನಡೆವ ಸಾಧ್ಯತೆ

## ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್.ದೊರೆಸ್ವಾಮಿ ಬಗೆಗಿನ ಹೇಳಿಕೆಗೆ ಪ್ರತಿಪಕ್ಷ ಗರಂ | ಸವಾಲೆದುರಿಸಲು ಆಡಳಿತ ಪಕ್ಷ ಸಿದ್ಧತೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಿಜೆಪಿ ಸರ್ಕಾರದ ಏಳು ತಿಂಗಳ 'ಮಧುಚಂದ್ರ' ಅವಧಿ ಮುಗಿದ ನಂತರ ಸೋಮವಾರದಿಂದ ಆರಂಭವಾಗಲಿರುವ ಒಂದು ತಿಂಗಳ ಬಜೆಟ್ ಅಧಿವೇಶನದಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ಸಂಬಂಧ ನಡೆದ ಗಲಾಟೆ, ಪಾಕ್ ಪರ ಘೋಷಣೆ, ನೆರೆ ಸಂತ್ರಸ್ತರಿಗೆ ಇನ್ನೂ ಸರಿಯಾಗಿ ಪರಿಹಾರ ಸಿಗದೇ ಇರುವುದು, ರೈತರ ಸಾಲ ಮನ್ನಾ ಪೂರ್ಣ ಪ್ರಮಾಣದಲ್ಲಿ ಆಗದೇ ಇರುವುದು, ಪಡಿತರ ಅಕ್ಕಿ ಪ್ರಮಾಣ ಕಡಿತ ಮಾಡುವ ಚಿಂತನೆ, ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್. ದೊರೆಸ್ವಾಮಿ ವಿರುದ್ಧ ಬಿಜೆಪಿ ಶಾಸಕ ಯತ್ನಾಳ ಹೇಳಿಕೆ ಪರ-ವಿರೋಧ ವಿಷಯಗಳು ಸಾಕಷ್ಟು ಕೋಲಾಹಲ ಉಂಟುಮಾಡುವ ಸಂಭವವಿದೆ.



ಇದರ ಜೊತೆಗೆ ಉಪಚುನಾವಣೆಯಲ್ಲಿ ಗೆದ್ದು 'ಅರ್ಹ'ರಾಗಿ ಸಚಿವ ಸ್ಥಾನ ಪಡೆದು ಬೀಗುತ್ತಿರುವ ಸಚಿವರು ಹಾಗೂ ಪ್ರತಿಪಕ್ಷಗಳ ಸದಸ್ಯರು ಮುಖಾಮುಖಿಯಾಗಿ ಅವರ ನಡುವೆ ಆರೋಪ-ಪ್ರತ್ಯಾರೋಪಗಳು ಪ್ರತಿಧ್ವನಿಸುವ ಸಾಧ್ಯತೆ ಇದೆ. ಜತೆಗೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಅವರು ಪ್ರಧಾನಿ ಮೋದಿ ಅವರನ್ನು ಕೊಲೆಗಡುಕ ಎಂದು ಹೇಳಿರುವುದು, ಸ್ವಾತಂತ್ರ್ಯ ಹೋರಾಟಗಾರ ಎಚ್. ಎಸ್. ದೊರೆಸ್ವಾಮಿ ಪಾಕ್ ಏಜೆಂಟ್ ಹಾಗೂ ಕಾಂಗ್ರೆಸ್ ಏಜೆಂಟ್ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿರುವುದು ಉಭಯ ಸದನಗಳಲ್ಲಿ ದೊಡ್ಡ ವಾಗ್ವಾದಕ್ಕೆ ಕಾರಣವಾಗುವುದು ಬಹುತೇಕ ನಿಶ್ಚಿತವಾಗಿದೆ.

ಇನ್ನುಳಿದಂತೆ ಕಳೆದ ವರ್ಷ ಬಂದ ನೆರೆ, ಪ್ರವಾಹದಿಂದ ಸಂತ್ರಸ್ತರಾದ ಎಲ್ಲರಿಗೂ ಪರಿಹಾರ ಸಿಗದೇ ಇರುವುದು, ಮನೆ ಕಳೆದುಕೊಂಡವರಿಗೆ ಮನೆ ನಿರ್ಮಾಣಕ್ಕೆ ಹಣ ಬಿಡುಗಡೆ ಮಾಡದೇ ಇರುವುದು, ಮೂಲಭೂತ ಸೌಲಭ್ಯ ಒದಗಿಸುವ ಕಾಮಗಾರಿ ವಿಳಂಬವಾಗಿರುವ ವಿಷಯವನ್ನು ಮುಂದಿಟ್ಟುಕೊಂಡು ಪ್ರತಿಪಕ್ಷಗಳು ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳಲು ಸಿದ್ಧವಾಗಿವೆ.

ಶಾಸಕರನಿಧಿಗೆಹಣಬಿಡುಗಡೆಮಾಡದಿರುವುದು, ಸರ್ಕಾರಿ ನೌಕರರ ವೇತನ ವಿಳಂಬ, ಒಂದು ಇಲಾಖೆಗೆ ನೀಡಿದ್ದ ಹಣ ಬೇರೆ ಇಲಾಖೆಗೆ ವರ್ಗಾವಣೆ, ಮೈತ್ರಿ ಸರ್ಕಾರದ ಅವಧಿಯಲ್ಲಿ ಘೋಷಿಸಿದ್ದ ರೈತರ ಸಾಲಮನ್ನಾ ಯೋಜನೆಯಡಿ ಎಲ್ಲ ರೈತರ ಸಾಲ ಮನ್ನಾ ಮಾಡದ ವಿಷಯ ಸದನದಲ್ಲಿ ಸಾಕಷ್ಟು ಕಾವು ಏರಿಸುವ ನಿರೀಕ್ಷೆಯಿದೆ. ಈ ತಿಂಗಳ ಅಂತ್ಯದವರೆಗೂ ಅಧಿವೇಶನ ನಡೆಯಲಿದೆ.

### ಪೌರತ್ವ ತಿದ್ದುಪಡಿ ಕಾಯ್ದೆ ಜಾರಿಗೆ ನಿರ್ಣಯ ಸಾಧ್ಯತೆ

ಅಧಿವೇಶನದ ಅವಧಿಯಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪೌರತ್ವ ತಿದ್ದುಪಡಿ ಕಾಯ್ದೆಯನ್ನು ರಾಜ್ಯದಲ್ಲಿ ಜಾರಿಗೆ ತರುವ ನಿರ್ಣಯವನ್ನು ತೆಗೆದುಕೊಳ್ಳುವ ಸಾಧ್ಯತೆ ಇದೆ. ಬಿಜೆಪಿಯೇತರ ಪಕ್ಷಗಳ ಆಡಳಿತವಿರುವ ಅನೇಕ ರಾಜ್ಯಗಳು ಈ ಕಾಯ್ದೆ ಜಾರಿಗೆ ತರುವುದಿಲ್ಲ ಎಂದು ನಿರ್ಣಯಿಸುತ್ತಿರುವ ಸಂದರ್ಭದಲ್ಲಿ ಬಿಜೆಪಿ ಸರ್ಕಾರದ ಆಡಳಿತವಿರುವ ಕರ್ನಾಟಕದಲ್ಲಿ ಕಾಯ್ದೆ ಜಾರಿಗೆ ತರುವ ನಿರ್ಣಯ ಕೈಗೊಳ್ಳಬೇಕೆಂಬ ಒತ್ತಡ ಹೈಕಮಾಂಡ್‌ನಿಂದ ಇರುತ್ತದೆ. ಒಂದು ವೇಳೆ ಅಂತಹ ನಿರ್ಣಯ ತೆಗೆದುಕೊಳ್ಳಲು ಮುಂದಾದಲ್ಲಿ ಉಭಯ ಸದನಗಳಲ್ಲಿ ಪ್ರತಿಪಕ್ಷಗಳಿಂದ ಪ್ರತಿರೋಧ ವ್ಯಕ್ತವಾಗಲಿದೆ.

**ಸಂವಿಧಾನದ ಕುರಿತು ಚರ್ಚೆ:** ವಿಶೇಷವಾಗಿ ದೇಶದ ಸಂವಿಧಾನ ಜಾರಿಗೆ ಬಂದು ಈ ವರ್ಷ 70 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಮಾ.3 ಮತ್ತು 4ರಂದು ಉಭಯ ಸದನಗಳಲ್ಲಿ ಸಂವಿಧಾನದ ಆಶಯ, ಇತಿಹಾಸ, ಮಹತ್ವಗಳ ಕುರಿತು ಎಲ್ಲ ಸದಸ್ಯರಿಗೂ ಮಾತನಾಡಲು ಅವಕಾಶ ಕಲ್ಪಿಸಲಾಗಿದೆ. ಈ ಎರಡು ದಿನಗಳ ಕಾಲ ಬೇರೆ ಯಾವುದೇ ಕಲಾಪ ನಿಗದಿಪಡಿಸದೇ ಕೇವಲ ಸಂವಿಧಾನದ ಬಗ್ಗೆ ಚರ್ಚೆಯಾಗಲಿದೆ. ಈ ಎರಡು ದಿನಗಳ ಚರ್ಚೆಯ ಅವಧಿಯಲ್ಲಿ ಪ್ರಮುಖವಾಗಿ ಪ್ರತಿಪಕ್ಷಗಳು ಪೌರತ್ವ ತಿದ್ದುಪಡಿ ಕಾಯ್ದೆ, ರಾಷ್ಟ್ರೀಯ ನೋಂದಣಿ ಕಾಯ್ದೆ, ಮೀಸಲಾತಿ ಮೂಲಭೂತ ಹಕ್ಕಲ್ಲ ಎಂಬ ಸುಪ್ರೀಂಕೋರ್ಟ್ ಆದೇಶವನ್ನು ಹಿನ್ನೆಲೆಯಾಗಿಟ್ಟುಕೊಂಡು ಪರೋಕ್ಷವಾಗಿ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಳ್ಳುವ ಸಾಧ್ಯತೆ ಇದೆ.

**8 ವಿಧೇಯಕ:** ವಿಧಾನಸಭೆಯಲ್ಲಿ 8 ವಿಧೇಯಕಗಳು ಮಂಡನೆಯಾಗಲಿವೆ.